RNU AIR DHARWAD

**APRIL 2,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ತಂತ್ರಜ್ಞಾನದ ಬೆಳವಣಿಗೆಯಿಂದ ಸೈಬರ್ ಅಪರಾಧಗಳು ವ್ಯಾಪಕವಾಗಿ ಹೆಚ್ಚುತ್ತಿವೆ. ಅದೇ ತಂತ್ರಜ್ಞಾನದ ಸಾಧ್ಯತೆಗಳನ್ನು ಬಳಸಿಕೊಂಡು ಸೈಬರ್ ಅಪರಾಧಗಳನ್ನು ಸಮರ್ಥವಾಗಿ ನಿಗ್ರಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಬೆಂಗಳೂರು, ಕೋರಮಂಗಲ ಪೊಲೀಸ್ ಕವಾಯತು ಮೈದಾನದಲ್ಲಿ ಜರುಗಿದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ, ಮುಖ್ಯಮಂತ್ರಿಗಳ ಪದಕ ಪುರಸ್ಕೃತರಿಗೆ ಪದಕಗಳನ್ನು ಪ್ರದಾನ ಮಾಡಿ ಅವರು ಮಾತನಾಡಿದರು. ಕಳೆದ ಮೂರು ವರ್ಷಗಳಿಂದ ಬಾಕಿ ಉಳಿದಿದ್ದ ಮುಖ್ಯಮಂತ್ರಿಗಳ ಪದಕವನ್ನು ಈ ಬಾರಿ ಒಟ್ಟಾಗಿ ವಿತರಿಸಲಾಗಿದೆ ಎಂದ ಅವರು, ಎಲ್ಲ ಪದಕ ಪುರಸ್ಕೃತರಿಗೆ ಅಭಿನಂದನೆ ಸಲ್ಲಿಸಿದರು.**

<><><>

**ಇಂದು ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳ ಪೊಲೀಸ್ ಕವಾಯತು ಮೈದಾನಗಳಲ್ಲಿ ಪೊಲೀಸ್ ಧ್ವಜ ದಿನಾಚರಣೆ–2025 ಜರುಗಿತು. ಧಾರವಾಡ ಜಿಲ್ಲಾ ಪೊಲೀಸ್ ಇಲಾಖೆಯಿಂದ ನಗರದ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ನಡೆದ ಧ್ವಜ ದಿನಾಚರಣೆಯಲ್ಲಿ ನಿವೃತ್ತ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಶಂಕರ ರಾಗಿ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಗೌರವ ವಂದನೆ ಸ್ವೀಕರಿಸಿದರು. ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತಾಲಯದ ವತಿಯಿಂದ, ಹುಬ್ಬಳ್ಳಿಯ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆಯಲ್ಲಿ, ನಿವೃತ್ತ ಪೊಲೀಸ್ ಸಬ್ ಇನ್ಸಪೆಕ್ಟರ್ ಎಸ್.ಎಸ್.ಜಕ್ಕನಗೌಡ್ರ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು.**

<><><>

**ಸಕಾಲ ಅರ್ಜಿ ವಿಲೇವಾರಿ, ಕೆರೆ ಒತ್ತುವರಿ ತೆರವು, ಕುಡಿಯುವ ನೀರಿನ ಗುಣಮಟ್ಟ, ಲಭ್ಯತೆ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ದಾವಣಗೆರೆ ಜಿಲ್ಲೆ ರಾಜ್ಯ ಮಟ್ಟದಲ್ಲಿ 5 ನೇ ಶ್ರೇಯಾಂಕದಲ್ಲಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ ಗಂಗಾಧರ ಸ್ವಾಮಿ ಹೇಳಿದರು. ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಅಪರಾಧ ಮತ್ತು ಅಪಘಾತಗಳ ಪ್ರಮಾಣ ಕಡಿಮೆ ಮಾಡುವಲ್ಲಿಯೂ ಜಿಲ್ಲಾಡಳಿತ ಪ್ರಗತಿ ಸಾಧಿಸಿದೆ ಎಂದರು.**

<><><>

**ಬೈಟ್: ಗಂಗಾಧರ ಸ್ವಾಮಿ 35 ಸೆಕೆಂದುಗಳು**

<><><>

ಕೃಷಿ ಕೂಲಿ ಕಾರ್ಮಿಕರು ಜೀವನ ನಿರ್ವಹಣೆ ಮಾಡಲು ಕೂಲಿ ಕೆಲಸಕ್ಕಾಗಿ ದೂರದ ನಗರಗಳಿಗೆ ವಲಸೆ ಹೋಗದೆ, ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡಬೇಕು ಎಂದು ಯಾದಗಿರಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಹಾದೇವ್ ಬಾಬಳಗಿ ಮನವಿ ಮಾಡಿದ್ದಾರೆ. ಏಪ್ರಿಲ್ **1** ರಿಂದ ದಿನಕ್ಕೆ **370** ರೂಪಾಯಿ ಕೂಲಿ ದರ ಏರಿಕೆ ಮಾಡಲಾಗಿದ್ದು. ಗ್ರಾಮೀಣ ಪ್ರದೇಶದ ಅರ್ಹ ಕೂಲಿ ಕಾರ್ಮಿಕರು ನರೇಗಾ ಸೌಲಭ್ಯ ಪಡೆಯಲು ಅರ್ಹರಾಗಿದ್ದಾರೆ ಎಂದು ತಿಳಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ **2024-25**ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ತೊಗರಿ ಖರೀದಿ ಪ್ರಕ್ರಿಯೆ, ಕಲಬುರಗಿ ಜಿಲ್ಲೆಯಲ್ಲಿ ಈಗಾಗಲೆ ಚಾಲ್ತಿಯಲ್ಲಿದ್ದು, ರೈತರ ಹಿತದೃಷ್ಠಿಯಿಂದ ತೊಗರಿ ಖರೀದಿಗೆ ನೊಂದಣಿಯನ್ನು ಏಪ್ರಿಲ್ **25** ರವರೆಗೆ ಹಾಗೂ ತೊಗರಿ ಖರೀದಿಯನ್ನು ಮೇ **1**ರ ವರೆಗೆ ವಿಸ್ತರಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

<><><>

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್, ಇಂದು ತಾಲ್ಲೂಕಿನ ಎಸ್.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದರು. ಗ್ರಾಮಸ್ಥರ ಕುಂದುಕೊರತೆಗಳನ್ನು ಆಲಿಸಿ, ಅಹವಾಲುಗಳನ್ನು ಸ್ವೀಕರಿಸಿದರು.

<><><>

ಬೆಲೆ ಏರಿಕೆ ಹಾಗೂ ರಾಜ್ಯ ಸರಕಾರದ ನೀತಿಗಳನ್ನು ಖಂಡಿಸಿ ಇಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಬಿಜೆಪಿ ರಾಜ್ಯ ಘಟಕದ ವತಿಯಿಂದ  ಅಹೋರಾತ್ರಿ ಧರಣಿ ಆಯೋಜಿಸಲಾಗಿದೆ. ಈ ಮಧ್ಯಾಹ್ನ **12** ಗಂಟೆ **30** ನಿಮಿಷಕ್ಕೆ ಧರಣಿ ಆರಂಭವಾಗಲಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ ನೇತೃತ್ವ ವಹಿಸಲಿದ್ದಾರೆ.

<><><>

ರಾಜ್ಯದ ಎಸ್ಕಾಂಗಳಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ ಬಹುದೊಡ್ಡ ಹಗರಣ ನಡೆದಿದ್ದು, ಈ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವುದಾಗಿ ಶಾಸಕ, ಮಾಜಿ ಉಪಮುಖ್ಯಮಂತ್ರಿ ಡಾಕ್ಟರ್ ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

<><><>

ಗದಗ ವೈದ್ಯಕೀಯ ಕಾಲೇಜಿಗೆ ಕೆ.ಹೆಚ್. ಪಾಟೀಲ್ ಅವರ ಹೆಸರಿಡಲು ಸರ್ಕಾರ ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಸಚಿವರು, ಶಾಸಕರು ಹಾಗೂ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಧನ್ಯವಾದ ತಿಳಿಸಿದರು.

<><><>

ನವ ಮಂಗಳೂರು ಬಂದರು, **2024-25**ನೇ ಹಣಕಾಸು ವರ್ಷದಲ್ಲಿ **46** ದಶಾಂಶ **01** ಮಿಲಿಯನ್ ಮೆಟ್ರಿಕ್ ಟನ್ **(**ಎಂಎಂಟಿ**)** ಸರಕು ನಿರ್ವಹಣೆ ಮಾಡಿದೆ, **600** ಕೋಟಿ ತೆರಿಗೆ ನಂತರದ ತಾತ್ಕಾಲಿಕ ಲಾಭ ಪಡೆದಿದೆ ಎಂದು ಎನ್ಎಂಪಿಎ ಅಧ್ಯಕ್ಷ ಡಾಕ್ಟರ ವೆಂಕಟರಮಣ ಅಕ್ಕರಾಜು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>